ಪ್ರಥಮ ದರ್ಜೆ ನ್ಯಾಯಿಕಾಧಿಕಾರಿಗಳ ನ್ಯಾಯಾಲಯ, ಗೌರಿಬಿದನೂರು

ಸಿ ಸಿ ನಂ.**935/2023**

ದಿಃ **11-08-2025** ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

| | | | |
|---|---|---|---|
| ಹೆಸರು | ಶ್ರೀಮತಿ ಮಂಜುಳಾ ಜಿ. | ಸಿ.ಡಬ್ಲ್ಯೂ | **05** |
| ವಯಸ್ಸು | 45 ವರ್ಷ | ಪಿ.ಡಬ್ಲ್ಯು: | **04** |
| ತಂದೆಯ / ಗಂಡನ ಹೆಸರು | ಜ್ಞಾನೇಶ್ ಎಂ.ಆರ್ | | |
| ವೃತ್ತಿ | ಅಬಕಾರಿ ನಿರೀಕ್ಷಕರು | | |
| ವಾಸಸ್ಥಳ | ಚಿಕ್ಕಬಳ್ಳಾಪುರ | | |

ಮುಖ್ಯ ವಿಚಾರಣೆಃಃ ಶ್ರೀ ಸರ್ಕಾರಿ ಅಭಿಯೋಜಕರಿಂದಃ

ನಾನು 13-02-2020 ರಿಂದ 17-08-2023 ರ ವರೆಗೆ ಚಿಕ್ಕಬಳ್ಳಾಪುರ ಉಪವಿಭಾಗದಲ್ಲಿ ಅಬಕಾರಿ ನಿರೀಕ್ಷಕರಾಗಿ ಕರ್ತವ್ಯ ನಿರ್ವಹಿಸಿದ್ದೆ.

ದಿನಾಂಕ 20-11-2022 ರಂದು ಚಾಸಾ-4 ರವರಿಂದ ಪ್ರಕರಣದ ಕಡತವನ್ನು ಪಡೆದುಕೊಂಡು ಪರಿಶೀಲಿಸಿ ಮುಂದಿನ ತನಿಖೆಯನ್ನು ಮಾಡಿರುತ್ತೇನೆ. ದಿನಾಂಕ 21-11-2022 ರಂದು ಮುಮಾ-1 ಅನ್ನು ಪರೀಕ್ಷೆಗಾಗಿ ಫ್ರಾಸಾ-2 ರವರ ಮುಖಾಂತರ ಕಳುಹಿಸಿಕೊಟ್ಟಿರುತ್ತೇನೆ. ಅದೇ ದಿನ ವಾಹನದ ಬಿ.ಎಕ್ಸ್ಟ್ರಾಕ್ಟ್ ವರದಿಯನ್ನು ಸಲ್ಲಿಸುವಂತೆ ಪ್ರಾದೇಶಿಕ ಸಾರಿಗೆ ಅಧಿಕಾರಿಗೆ ಪತ್ರ ಬರೆದು ಅದೇ ದಿನ ಸದರಿ ವರದಿಯನ್ನು ಪಡೆದಿರುತ್ತೇನೆ. ಸಾಕ್ಷಿಗೆ ದಿನಾಂಕ 21-11-2022 ರ ಪತ್ರವನ್ನು ತೋರಿಸಲಾಗಿ ಅದನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ-7 ಎಂದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು 7 ಎ ಎಂದು ಗುರುತಿಸಲಾಯಿತು. ಸಾಕ್ಷಿಗೆ ಬಿ ಎಕ್ಸ್ಟ್ರಾಕ್ಟ್ ವರದಿಯನ್ನು ತೋರಿಸಲಾಗಿ ಅದನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ-8 ಎಂದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು 8 ಎ ಎಂದು ಗುರುತಿಸಲಾಯಿತು. ಸಾಕ್ಷಿಗೆ ನಿಪಿ-5 ಅನ್ನು ತೋರಿಸಲಾಗಿ ಅದನ್ನು ನೋಡಿ ಗುರುತಿಸಿದ್ದು ಅದರಲ್ಲಿರುವ ಸಾಕ್ಷಿಯ ಸಹಿಯನ್ನು 5 ಬಿ ಎಂದು ಗುರುತಿಸಲಾಯಿತು. ಸಾಕ್ಷಿಗೆ ನಿಪಿ-6 ಅನ್ನು ತೋರಿಸಲಾಗಿ ಅದನ್ನು ನೋಡಿ ಗುರುತಿಸಿದ್ದು ಅದರಲ್ಲಿರುವ ಸಾಕ್ಷಿಯ ಸಹಿಯನ್ನು 6 ಎ ಎಂದು ಗುರುತಿಸಲಾಯಿತು.

ನಿಪಿ-8 ರ ಮಾಹಿತಿಯಂತೆ ವಾಹನದ ಮಾಲೀಕರಿಗೆ ನೋಟೀಸ್ ನೀಡಿರುತ್ತೇನೆ. ಸಾಕ್ಷಿಗೆ ದಿನಾಂಕ 22-11-2022 ರ ನೋಟೀಸನ್ನು ತೋರಿಸಲಾಗಿ ಅದನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ-9 ಎಂದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು 9 ಎ ಎಂದು

ಗುರುತಿಸಲಾಯಿತು. ದಿನಾಂಕ 08-12-2022 ರಂದು ಆಪಾದಿತನ ಸ್ವ ಇಚ್ಛಾ ಹೇಳಿಕೆಯನ್ನು ಪಡೆದುಕೊಂಡಿರುತ್ತೇನೆ. ದಿನಾಂಕ 23-11-2022 ರಂದು ಚಾಸಾ-1 ರಿಂದ 3 ರವರ ಹೇಳಿಕೆಗಳನ್ನು ಪಡೆದುಕೊಂಡಿರುತ್ತೇನೆ. ನಂತರ ತನಿಖೆಯನ್ನು ಪೂರ್ಣಗೊಳಿಸಿ ಸಾಕಷ್ಟು ಸಾಕ್ಷ್ಯಾಧಾರಗಳು ಇದ್ದ ಕಾರಣ ದೋಷಾರೋಪಣೆ ಪಟ್ಟಿಯನ್ನು ಸಲ್ಲಿಸಿರುತ್ತೇನೆ. ವಾಹನವನ್ನು ನೋಡಿದರೆ ಗುರುತಿಸುತ್ತೇನೆ. ಸಾಕ್ಷಿಯು ನ್ಯಾಯಾಲಯದ ಮುಂದೆ ಇರುವ ಮುಮಾ-1 ಮತ್ತು ಆಪಾದಿತನನ್ನು ನೋಡಿ ಗುರುತಿಸಿದರು.

<u>ಪಾಟೀ ಸವಾಲು: ಆಪಾದಿತನ ಪರ ವಕೀಲರಾದ ಶ್ರೀ ವಿ.ವಿ.ಕೆ. ರವರಿಂದ:</u>

ವಾಹನದ ಮಾಲೀಕನಿಗೆ ನೋಟೀಸ್ ಕೊಟ್ಟಿದ್ದೆವು. ಸಾಕ್ಷಿಯು ಮುಂದುವರೆದು ಆಪಾದಿತನು ತನ್ನ ಸ್ವ-ಇಚ್ಛಾ ಹೇಳಿಕೆಯಲ್ಲಿ ತಾನೇ ಕೃತ್ಯ ಮಾಡಿರುವುದಾಗಿ ಒಪ್ಪಿಕೊಂಡ ಮೇರೆಗೆ ಮಾಲೀಕನ ಹೇಳಿಕೆ ಪಡೆದುಕೊಂಡಿಲ್ಲ ಎಂದು ನುಡಿಯುತ್ತಾರೆ. ವಾಹನ ಮಾಲೀಕನ ಪತ್ತೆ ಹಚ್ಚಲು ಸಿಬ್ಬಂದಿ ನೇಮಕ ಮಾಡಲು ತೊಂದರೆ ಇರಲಿಲ್ಲ. ವಾಹನದ ಮಾಲೀಕನ ವಿಚಾರಣೆ ಮಾಡಿದ್ದರೆ ಸತ್ಯಾಂಶ ಹೊರಬರುತ್ತಿತ್ತು ಎಂದರೆ ಸರಿಯಲ್ಲ. ಆಪಾದಿತನು ಯಾವುದೇ ಹೇಳಿಕೆ ಕೊಟ್ಟಿಲ್ಲ ಎಂದರೆ ಸರಿಯಲ್ಲ. ಮುಮಾ-1 ರ ಮೇಲೆ ಅಂಟಿಸಿರುವ ಚೀಟಿಯಲ್ಲಿ ಆಪಾದಿನ ಸಹಿ ಇಲ್ಲ ಎಂದರೆ ಸರಿ. ಸಾಕ್ಷಿಯು ಮುಂದುವರೆದು ಆಪಾದಿತನ ಸಹಿ ಅವಶ್ಯಕತೆ ಇಲ್ಲ ಎಂದು ನುಡಿಯುತ್ತಾರೆ. ಯಾವುದೇ ತನಿಖೆ ಮಾಡದೆ ದಾಖಲೆಗಳನ್ನು ಸೃಷ್ಟಿ ಮಾಡಿದ್ದೇವೆ ಎಂದರೆ ಸರಿಯಲ್ಲ. ಆಪಾದಿತನು ಯಾವುದೇ ವಾಹನ ಪಡೆದಿಲ್ಲ ಮತ್ತು ಕೃತ್ಯ ಮಾಡಿಲ್ಲ ಮಾಡಿಲ್ಲ ಎಂದರೆ ಸರಿಯಲ್ಲ. ಮುಮಾ-1 ಮತ್ತು ಆಪಾದಿತನಿಗೆ ಯಾವುದೇ ಸಂಬಂದ ಇಲ್ಲ ಎಂದರೆ ಸರಿಯಲ್ಲ. ಅಂಕಿ ಅಂಶಗಳಿಗಾಗಿ ಈ ಪ್ರಕರಣ ದಾಖಲಾಗಿದೆ ಎಂದರೆ ಸರಿಯಲ್ಲ. ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಮರುವಿಚಾರಣೆ ಇರುವುದಿಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು).

ಓ.ಹೇ.ಕೇ.ಸ. ಇದೆ

ಸಹಿ/-
ಪ್ರ.ಸಿ.ನ್ಯಾ.ಮತ್ತು ಜೆಎಂಎಫ್‌ಸಿ,
ಗೌರಿಬಿದನೂರು